## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ದಾವಣಗೆರೆಗೆ ಸ್ಥಳಾಂತರಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಅಧಿಸೂಚನೆ ಸಂಖ್ಯೆ ಪಿ.ಡಿ. 75 ಯೋಪರ 2018, ದಿನಾಂಕ:10.01.2019.
2. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಸಾರ್ವಜನಿಕ ಹಿತಾಸಕ್ತಿ ರಿಟ್ ಅಪೀಲು ಸಂಖ್ಯೆ: 5563/2021 & 35374/2019.

**ಪ್ರಸ್ತಾವನೆ:**

1. ಮೇಲೆ (1)ರಲ್ಲಿ ಓದಲಾದ ದಿನಾಂಕ: 10.01.2019ರ ಅಧಿಸೂಚನೆಯಲ್ಲಿ, ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಯನ್ನು ತೀವ್ರಗೊಳಿಸಲು ಹಾಗೂ ಅ ಭಾಗದ ಸಾರ್ವಜನಿಕರಿಗೆ ರಾಜ್ಯದ ಆಡಳಿತವು ಹತ್ತಿರವಾಗಲು ಕರ್ನಾಟಕ ಸರ್ಕಾರದ 9 ಕಛೇರಿಗಳನ್ನು ಉತ್ತರ ಕರ್ನಾಟಕದ ವಿವಿಧ ಸ್ಥಳಗಳಿಗೆ ವರ್ಗಾಯಿಸಲಾಗಿದ್ದು, ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿನ ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ದಾವಣಗೆರೆಗೆ ವರ್ಗಾಯಿಸಲಾಗಿದೆ.

2. ಕರ್ನಾಟಕ ನೀರಾವರಿ ನಿಗಮ ನಿಯಮಿತವು ಕರ್ನಾಟಕ ಸರ್ಕಾರದ ಪೂರ್ಣ ಸ್ವಾಮ್ಯತೆಯನ್ನು ಹೊಂದಿರುವ ಸಂಸ್ಥೆಯಾಗಿದ್ದು, ಅಗಸ್ಟ 19,1994ರಂದು ಕಂಪನಿ ಕಾಯ್ದೆ, 1956ರ ಅನುಸಾರ ಸ್ಥಾಪಿಸಲಾಗಿದೆ. ತುಂಗಾ ಮತ್ತು ಭದ್ರಾ ಮೇಲ್ದಂಡೆ ಯೋಜನೆಗಳು, ತುಂಗಾ ಭದ್ರಾ ಅಣೆಕಟ್ಟು ಯೋಜನೆ, ಕಳಸ ಬಂಡೂರಿ ಯೋಜನೆ, ಘಟಪ್ರಭಾ ಮತ್ತು ಮಲಪ್ರಭಾ ಯೋಜನೆಗಳು, ಕಾರಂಜ ಯೋಜನೆಗಳು ಅಮರ್ಜ ಯೋಜನೆಗಳು ಮತ್ತು ಇತರೆ ಏತ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ಎಲ್ಲಾ ಯೋಜನೆಗಳನ್ನು ಅನುಷ್ಠಾನಗೊಳಿಸುವುದು ಈ ನಿಗಮದ ಉದ್ದೇಶವಾಗಿದೆ. ಇದರ ಆಡಳಿತ ಕಛೇರಿಯು ಬೆಂಗಳೂರಿನಲ್ಲಿ 1998, ನವೆಂಬರ್ ರಿಂದ ಕಾರ್ಯನಿರ್ವಹಿಸುತ್ತಿದೆ.

3. ದಿನಾಂಕ: 10.01.2019ರ ಆದೇಶದನ್ವಯ ಕಛೇರಿಗಳನ್ನು ಉತ್ತರ ಕರ್ನಾಟಕದ ವಿವಿಧ ಸ್ಥಳಗಳಿಗೆ ಸ್ಥಳಾಂತರಿಸದೇ ಇರುವ ಕ್ರಮವನ್ನು ಪ್ರಶ್ನಿಸಿ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ರಿಟ್ ಅಪೀಲು ಸಂಖ್ಯೆ: 5563/2021 & 35374/2019 ದಾಖಲಾಗಿದ್ದು, ಈ ಪ್ರಕರಣವು ಅಗ್ಗಿಂದಾಗ್ಗೆ ವಿಚಾರಣೆಗೆ ಬಂದ ಸಂದರ್ಭದಲ್ಲಿ ನ್ಯಾಯಾಲಯವು ತೀವ್ರವಾಗಿ ಆಕ್ಷೇಪಿಸಿರುತ್ತದೆ. ಅಲ್ಲದೆ ಮೇಲ್ಕಂಡ ಆದೇಶದನ್ವಯ ಕೈಗೊಂಡ ಕ್ರಮದ ಬಗ್ಗೆ ಅನುಸರಣ ವರದಿಯನ್ನು ಮಾನ್ಯ ನ್ಯಾಯಲಯಕ್ಕೆ ಅಫಿಡವಿಟ್ ಮುಖಾಂತರ ಸಲ್ಲಿಸಬೇಕಾಗಿರುತ್ತದೆ.

4. ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಉತ್ತರ ಕರ್ನಾಟಕ ಸರ್ವತೋಮುಖ ಅಭಿವೃದ್ಧಿಯನ್ನು ತೀರ್ವಗೊಳಿಸಲು ಹಾಗೂ ಆ ಭಾಗದ ಕರ್ನಾಟಕ ನೀರಾವರಿ ನಿಗಮ ನಿಯಮಿತ ಯೋಜನೆಗಳ ಅನುಷ್ಠಾನ ಹಿತದೃಷ್ಠಿಯಿಂದ , ಸಾರ್ವಜನಿಕ ರಾಜ್ಯದ ಆಡಳಿತವು ಹತ್ತಿರವಾಗಲು ಅನುವಾಗುವಂತೆ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿನ ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ದಾವಣಗೆರೆಗೆ ಸ್ಥಾಳಾಂತರಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 333 ಎಸ್ಎಎಸ್ 2021,**

**ಬೆಂಗಳೂರು, ದಿನಾಂಕ: 23.06.2022**

5. ಸರ್ಕಾರದ ನೀತಿಯಂತೆ ಆಡಳಿತಾತ್ಮಕ ಹಾಗೂ ಸಾರ್ವಜನಿಕ ಹಿತದೃಷ್ಠಿಯಿಂದ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿನ ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ದಾವಣಗೆರೆಗೆ ಅಧಿಕಾರಿ/ಸಿಬ್ಬಂದಿಗಳ ಸಮೇತ ಸ್ಥಳಾಂತರಿಸಿ ಆದೇಶಿಸಿದೆ.

...2/-

6. ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು ಕಛೇರಿಯನ್ನು ದಾವಣಗೆರೆಯಲ್ಲಿ ಯಾವುದೇ ವಿಳಂಬಕ್ಕೆ ಆಸ್ಪದ ನೀಡದೇ ಕಾಲಮಿತಿಯಲ್ಲಿ ಹಾಗೂ ಈ ವಿಷಯದ ಕುರಿತು ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆಯನ್ನು ಸಲ್ಲಿಸದೇ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳಾಂತರಿಸಿ ಈ ಬಗ್ಗೆ ಮಾನ್ಯ ನ್ಯಾಯಾಲಯಕ್ಕೆ ಅಫಿಡವಿಟ್ ಸಲ್ಲಿಸಲು ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ

ಮತ್ತು ಅವರ ಹೆಸರಿನಲ್ಲಿ,

Manjunatha H M 23/6

**(ಮಂಜುನಾಥ ಹೆಚ್.ಎಂ)**

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ).

**ಇವರಿಗೆ:**

1. ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ) / (ಆಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ) / (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ ಕರ್ನಾಟಕ, ಬೆಂಗಳೂರು-01.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
3. ವಿಭಾಗೀಯ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು.
4. ವಿಭಾಗೀಯ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ/ದಾವಣಗೆರೆ / ಧಾರವಾಡ ಜಿಲ್ಲೆ
6. ಮುಖ್ಯ ಅಭಿಯಂತರರು, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು / ಆಲಮಟ್ಟಿ.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು/ಧಾರವಾಡ.
10. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು/ಮೈಸೂರು.
11. ನಿರ್ದೇಶಕರು, ಕಾಡಾ, ಬೆಂಗಳೂರು.
12. ಎಲ್ಲಾ ಮುಖ್ಯ ಅಭಿಯಂತರರುಗಳು, ಜಲಸಂಪನ್ಮೂಲ ಇಲಾಖೆ,
13. ನಿರ್ದೇಶಕರು, ವಾಲ್ಮಿ, ಧಾರವಾಡ.
14. ಎಲ್ಲಾ ಆಡಳಿತಾಧಿಕಾರಿಗಳು, ಕಾಡಾ ಜಲಸಂಪನ್ಮೂಲ ಇಲಾಖೆ
15. ನಿರ್ದೇಶಕರು, ಕೆ.ಇ.ಆರ್.ಎಸ್.ಕೆ.ಆರ್.ಸಾಗರ, ಮಂಡ್ಯ ಜಿಲ್ಲೆ.
16. ಮುಖ್ಯ ಅಭಿಯಂತರರು, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ, ಬಾಗಲಕೋಟೆ,
17. ಜಲಸಂಪನ್ಮೂಲ ಇಲಾಖೆಯ ಎಲ್ಲಾ ಅಧೀಕ್ಷಕ ಇಂಜಿನಿಯರ್/ಕಾರ್ಯಪಾಲಕ ಇಂಜಿನಿಯರ್‌ಗಳು -ಸಂಬಂಧಿಸಿದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಮುಖ್ಯ ಇಂಜಿನಿಯರ್‌ಗಳ ಮುಖಾಂತರ
18. ಹೆಚ್ಚುವರಿ ನಿರ್ದೇಶಕರು ಹಾಗೂ ಕಾರ್ಯಕಾರಿ ಮುಖ್ಯಸ್ಥರು ಖಜಾನೆ-2, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು 560009.
19. ಮುಖ್ಯ ಅಭಿಯಂತರರು, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಬೆಂಗಳೂರು-560001.
20. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು-560001.
21. ಮಾನ್ಯ ಜಲಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
22. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು,
23. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ
24. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ಇವರ ಆಪ್ತ ಕಾರ್ಯದರ್ಶಿ
25. ಸರ್ಕಾರದ ಅಪರ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿ
26. ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ ಮತ್ತು ಲೋಕೋಪಯೋಗಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ
27. ಸರ್ಕಾರದ ಜಂಟಿ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ (ಸೇವೆಗಳು) ಇವರ ಆಪ್ತ ಸಹಾಯಕ.
28. ಸರ್ಕಾರದ ಉಪ ಕಾರ್ಯದರ್ಶಿ (ಕೆ.ಬಿ.ಜಿ.ಎನ್.ಎಲ್) ಇವರ ಆಪ್ತ ಸಹಾಯಕ.
29. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ), (ಸೇವೆಗಳು-ಬಿ) ಮತ್ತು (ಸೇವೆಗಳು-ಸಿ)
30. ಶಾಖಾ ರಕ್ಷಕ ಕಡತ/ ಹೆಚ್ಚುವರಿ ಪ್ರತಿಗಳು.